## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:-** ಕೆಲವೊಂದು ವರ್ಗದ ಹುದ್ದೆಗಳಿಗೆ ಹೆಚ್ಚಿನ ವೇತನ ಶ್ರೇಣಿಗಳನ್ನು ನೀಡುವ ಕುರಿತು 5ನೇ ರಾಜ್ಯ ವೇತನ ಆಯೋಗವು ಮಾಡಿರುವ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸುವ ಬಗ್ಗೆ.

**ಓದಲಾಗಿದೆ:-** 1. ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 8 ಎಸ್‌ಆರ್‌ಪಿ 07 ದಿನಾಂಕ 16-5-2007
2. ಸರ್ಕಾರಿ ಅಧಿಸೂಚನೆ ಸಂಖ್ಯೆ:ಎಫ್‌ಡಿ 17 ಎಸ್‌ಆರ್‌ಪಿ 07 ದಿನಾಂಕ 16-05-2007.

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ದಿನಾಂಕ 16-5-2007ರ ಸರ್ಕಾರಿ ಆದೇಶದಲ್ಲಿ 5ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನ ಮೇರೆಗೆ ರಾಜ್ಯ ಸರ್ಕಾರಿ ನೌಕರರ ವೇತನ ಶ್ರೇಣಿಗಳನ್ನು ದಿನಾಂಕ 1-7-2005 ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಲಾಗಿದೆ.

5ನೇ ರಾಜ್ಯ ವೇತನ ಆಯೋಗವು ಸಲ್ಲಿಸಿರುವ ತನ್ನ ಅಂತಿಮ ವರದಿಯಲ್ಲಿನ 2ನೇ ಸಂಪುಟದಲ್ಲಿ ಕೆಲವೊಂದು ವರ್ಗದ ಹುದ್ದೆಗಳಿಗೆ ಹೆಚ್ಚಿನ ವೇತನ ಶ್ರೇಣಿಗಳನ್ನು ನೀಡುವ ಕುರಿತು ಶಿಫಾರಸ್ಸು ಮಾಡಿದೆ. ವೇತನ ಆಯೋಗವು ಮಾಡಿರುವ ಶಿಫಾರಸ್ಸನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

### ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 25 ಎಸ್‌ಆರ್‌ಪಿ 2011
### ಬೆಂಗಳೂರು, ದಿನಾಂಕ: 20ನೇ ಏಪ್ರಿಲ್ 2011

2007ರ ಕರ್ನಾಟಕ ನಾಗರಿಕ ಸೇವಾ (ಪರಿಷ್ಕೃತ ವೇತನ) ನಿಯಮಗಳ ನಿಯಮ 4ರ ಉಪ-ನಿಯಮ (2)ರ ಮೂಲಕ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು, ಕೆಳಗಿನ ಪಟ್ಟಿಯ ಅಂಕಣ (2)ರಲ್ಲಿ ನಿರ್ದಿಷ್ಟ ಪಡಿಸಿದ ಹುದ್ದೆಗಳಿಗೆ ಅನ್ವಯವಾಗುವ ವೇತನ ಶ್ರೇಣಿಯನ್ನು ಪಟ್ಟಿಯಲ್ಲಿನ ಅಂಕಣ (3)ರಲ್ಲಿ ನಮೂದಿಸಿರುವ ವೇತನ ಶ್ರೇಣಿಗೆ ಬದಲಾಗಿ ಅಂಕಣ (4)ರಲ್ಲಿ ನಮೂದಿಸಿರುವ ವೇತನ ಶ್ರೇಣಿ ಆಗಿರತಕ್ಕದ್ದೆಂದು ಈ ಮೂಲಕ ಆದೇಶಿಸಿದೆ.

| ಇಲಾಖೆ | ಹುದ್ದೆ | ಪ್ರಸ್ತುತ 2007ರ ವೇತನ ಶ್ರೇಣಿ ರೂ. | ಪರಿಷ್ಕೃತ 2007ರ ವೇತನ ಶ್ರೇಣಿ ರೂ. |
|---|---|---|---|
| (1) | (2) | (3) | (4) |
| ಪೋಲಿಸ್ ಇಲಾಖೆ (ವಿಧಿ ವಿಜ್ಞಾನ ಪ್ರಯೋಗಾಲಯ) | (1) ವೈಜ್ಞಾನಿಕ ಸಹಾಯಕ | 8825-16000 | 10800-20025 |
| | (2) ವೈಜ್ಞಾನಿಕ ಅಧಿಕಾರಿ | 11400-21600 | 12000-22650 |

2. ಈ ಆದೇಶದ ಮೂಲಕ ಮಂಜೂರು ಮಾಡಲಾದ ಪರಿಷ್ಕೃತ ವೇತನ ಶ್ರೇಣಿಗಳು **ತಕ್ಷಣದಿಂದ** ಜಾರಿಗೆ ಬರುತ್ತವೆ.

3. ಮೇಲಿನ ಪಟ್ಟಿಯಲ್ಲಿ ನಮೂದಿಸಿರುವ ಹುದ್ದೆಗಳನ್ನು ಧಾರಣ ಮಾಡಿರುವ ನೌಕರರ ವೇತನವನ್ನು ಪರಿಷ್ಕೃತ ವೇತನ ಶ್ರೇಣಿಯಲ್ಲಿ ಕರ್ನಾಟಕ ನಾಗರಿಕ ಸೇವಾ ನಿಯಮಗಳ ನಿಯಮ 43ರಲ್ಲಿ ಕಲ್ಪಿಸಿರುವ ಅವಕಾಶಗಳ ಅನುಸಾರ ನಿಗದಿಪಡಿಸತಕ್ಕದ್ದು.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ**

(ಸುಂದರ ರಾಜ ಗುಪ್ತ)
**ಸರ್ಕಾರದ ಉಪಕಾರ್ಯದರ್ಶಿ**
**ಆರ್ಥಿಕ ಇಲಾಖೆ (ಸೇವೆಗಳು-2)**

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಇಲಾಖಾ ಮುಖ್ಯಾಧಿಕಾರಿಗಳು.
4. ಜಿಲ್ಲಾಧಿಕಾರಿಗಳು.
5. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
7. ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
8. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
9. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
12. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
14. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
15. ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.
16. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'A', ಬಹುಮಹಡಿಗಳ ಕಟ್ಟಡ, ಬೆಂಗಳೂರು.
17. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
18. ವಾರಪತ್ರ.
19. ಶಾಖೆಯ ರಕ್ಷಾ ಕಡತ.

ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲತಾಣ **www.finance.kar.nic.in** ವೀಕ್ಷಿಸಿ.